# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 19.12.2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ-19-12-2020ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ಎಸ್.ಪ್ರಭಾಕರ್, ಮುಖ್ಯ ಅಭಿಯಂತರರು (ಪೂರ್ವ)ಬಿ.ಬಿ.ಎಂ.ಪಿ. | 9480685379 |
| 2 | ಶ್ರೀ.ಸತೀಶ್.ಡಿ ಸ.ಇಂ-152 ವಾರ್ಡ್ | 9964310730 |
| 3 | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| 4 | ಶ್ರೀ ಪುರುಷೋತ್ತಮ, (ಎಲೆಕ್ಟ್ರೀಕಲ್, ಬಿ.ಬಿ.ಎಂ.ಪಿ) | 9611177415 |
| 5 | ಶ್ರೀ. ಹರೀಶ್.ಹೆಚ್.ಪಿ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ | 9538897735 |
| 6 | ಶ್ರೀಮತಿ.ಆಶಾ.ಹೆಚ್. ಸಹಾಯಕ ಅಭಿಯಂತರರು ಬೇಸ್ಕಾಂ | 9900724229 |
| 7 | ಶ್ರೀ ಜಿನ್‌ಸನ್ ಕೆ.ಜೆ, ಮುಖ್ಯಸ್ಥರು ಭುವನಪ್ಪ & ಕಾವೇರಿ ಬಡಾವಣೆ | 9886263222 |
| 8 | ಶ್ರೀ ಸೈಯದ್ ನಜರೂದ್ದಿನ್, ಸದಸ್ಯರು | 9741518897 |
| 9 | ಶ್ರೀ.ಎಮ್.ಎಸ್. ರಾಮಸುಬ್ರಮಣ್ಯ ಸಹಾಯಕ ಅಭಿಯಂತರರು ರಸ್ತೆ ಮೂಲಭೂ ಸೌಕರ್ಯ(ದಕ್ಷಿಣ) | 6360535661 |
| 10 | ಶ್ರೀ.ಎನ್.ಲೋಕೇಶ್ | 9448579144 |
| 11 | ಶ್ರೀ ಮುನೇಂದ್ರ ವಾರ್ಡ್ ಮೇಲ್ವಿಚಾರಕರು ಘ.ತ್ಯಾ.ನಿ | 9901002067 |
| 12 | ಶ್ರೀ ಭದ್ರಿ | 9538975386 |
| 13 | ಶ್ರೀ ಭಿಮಪ್ಪ ಪಿ.ಎಸ್.ಐ ಎಸ್.ಜಿ.ಪಾಳ್ಯ ಪೊಲೀಸ್ ಠಾಣೆ | 9844631926 |
| 14 | ಶ್ರೀ ತಿಮ್ಮೆಗೌಡ ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 9845644651 |

1) ಕಳೆದ ಸಭೆಯಲ್ಲಿ ಶ್ರೀ ಸೈದ್ ನಜರುದ್ದಿನ್ ರವರು 6ನೇ ಡಿ ಮುಖ್ಯರಸ್ತೆಯಲ್ಲಿ ಸಿ.ಸಿ.ಟಿ.ವಿ ಅಳವಡಿಸಬೇಕಾಗಿರುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದರು.

ಈ ಸಂಬಂಧ ವಾರ್ಡ್ ಅಭಿಯಂತರರು ಮಾತನಾಡಿ, ಸಿ.ಸಿ.ಟಿ.ವಿ ಅಳವಡಿಸುವ ಕಾಮಗಾರಿಗೆ ಕಾರ್ಯದೇಶ ನೀಡಲಾಗಿರುತ್ತದೆ, ಸಧ್ಯದಲ್ಲೆ ಸಿ.ಸಿ.ಟಿ.ವಿಯನ್ನು ಅಳವಡಿಸುವ ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

2) ಕಳೆದ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಚರ್ಚಿಸಲಾಗಿದ್ದ ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ರಸ್ತೆಗಳು ಮತ್ತು ಶೌಚಲಯಗಳ ನಿರ್ಮಾಣದ ಅಗತ್ಯತೆಯ ಬಗ್ಗೆ ಸೂಕ್ತ ಸ್ಥಳವಕಾಶಗಳೊಂದಿಗೆ ಮಾಹಿತಿ ನೀಡಲು ಮತ್ತೊಮ್ಮೆ ಹಾಜರಾಗಿದ್ದ ಅಧಿಕಾರಿಗಳು ಮತ್ತು ಸದಸ್ಯರವರಿಗೆ ತಿಳಿಸಲಾಯಿತು.

3) ಕಳೆದ ಸಭೆಯಲ್ಲಿ ಶ್ರೀಮತಿ ಸಂಗಿತಾ ಪಾಟೀಲ್ ಪಿ.ಎಸ್.ಐ ಸಂಚಾರಿ ಪೊಲೀಸ್ ರವರು ಮಾತನಾಡಿ ಸೆಂಟ್‌ಜಾನ್ಸ್ ಸಿಗ್ನಲ್‌ಹತ್ತಿರವಿರುವ ಸ್ಕೈವಾಕ್‌ನ ಲಿಫ್ಟ್ ಚಾಲ್ತಿಯಲ್ಲಿರುವುದಿಲ್ಲ ಹಾಗೂ ಗ್ರೀಲ್ ಅಳವಡಿಸಲು ಪ್ರಸ್ತಾಪಿಸಲಾಗಿರುತ್ತದೆ.

ಈ ಸಂಬಂಧ ಶ್ರೀ ರಾಮ್ ರಸ್ತೆ ಮೂಲಭೂತ ಸೌಕರ್ಯ ಕೇಂದ್ರ ರವರು ಮಾತನಾಡಿ ಸೆಂಟ್‌ಜಾನ್ಸ್ ಸಿಗ್ನಲ್‌ಹತ್ತಿರವಿರುವ ಸ್ಕೈವಾಕ್‌ನ ಲಿಫ್ಟ್ ಚಾಲ್ತಿಯಲ್ಲಿರುವುದಾಗಿ ತಿಳಿಸಿದರು.

S. Prabhu



Scanned with CamScanner

4) ಮಾನ್ಯ ಅಧ್ಯಕ್ಷರು ಮಾತನಾಡಿ, ತಾವರಕೆರೆ ಮುಖ್ಯರಸ್ತೆಯನ್ನು ಡಾಂಬರೀಕರಣ ಹಾಗೂ ಕಾಂಕ್ರೀಟ್ ಚರಂಡಿ ಕಾಮಗಾರಿ ವಿಳಂಬವಾಗುತ್ತಿರುವ ಬಗ್ಗೆ ರಾಮ್ ಸಹಾಯಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ರವರರೊಂದಿಗೆ ಪ್ರಸ್ತಾಪಿಸಲಾಯಿತು.

ಈ ಸಂಬಂಧ ಸದರಿರವರು ಮಾತನಾಡಿ ತಾವರೆಕೆರೆ ಮುಖ್ಯರಸ್ತೆ ಕಾಮಗಾರಿಯು ಕಾರ್ಯದೇಶ ಹಂತದಲಿದ್ದು, ಸದ್ಯದಲ್ಲೆ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಎಂದು ತಿಳಿಸಿರುತ್ತಾರೆ.

5) ಕಳೆದ ಸಭೆಯಲ್ಲಿ ಚರ್ಚಿಸಲಾಗಿದ್ದ ಮಾರುತಿನಗರ ಹಾಗೂ ಮಡಿವಾಳ ವ್ಯಾಪ್ತಿಯಲ್ಲಿ ಒಳಚರಂಡಿ ಮ್ಯಾನ್‌ಹೋಲ್‌ಗಳ ಮುಚ್ಚಳಗಳು ಹಾಳಾಗಿದ್ದರ ಬಗ್ಗೆ ಅಧ್ಯಕ್ಷರು ಪ್ರಸ್ತಾಪಿಸಲಾಗಿ,

ಈ ಸಂಬಂಧ ಶ್ರೀ ಹರೀಶ್‌ರವರು ಮಾತನಾಡಿ ಸದರಿ ಪ್ರಸ್ತಾಪಿತ ವಿಷಯದ ಬಗ್ಗೆ ಕ್ರಮಕೈಗೊಳ್ಳಲಾಗಿರುತ್ತದೆ ಎಂದು ತಿಳಿಸಿದರು.

6) ಮಾನ್ಯ ಅಧ್ಯಕ್ಷರು ಮಾತನಾಡಿ ಕಂದಾಯ ಸಂಗ್ರಹಣೆ ಬಗ್ಗೆ ವಿವರಗಳನ್ನು ಕೇಳಲಾಗಿ, ಸಭೆಯಲ್ಲಿ ಹಾಜರಿದ್ದ ಶ್ರೀ ನವೀನ್ ಕಂದಾಯ ಪರಿವೀಕ್ಷಕರು ಮಾತನಾಡಿ ಪ್ರತಿವಾರ ಕನಿಷ್ಠ 300 ಆಸ್ತಿಗಳನ್ನು ಸರ್ವೆಮಾಡಬೇಕಾಗಿರುತ್ತದೆ, ಎಂದಿನಂತೆ ಕಂದಾಯ ಸಂಗ್ರಹಣೆ ಮಾಡಲಾಗುತ್ತಿರುತ್ತದೆ ಮತ್ತು ಪ್ರತಿ ಬುಧವಾರ ಕಂದಾಯ ಸಂಗ್ರಹಣೆ ಡ್ರೈವ್‌ನ್ನು ಆಯೋಜಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

7) ಅಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹ್ಯಾಂಗಿಂಗ್ ಕೇಬಲ್ ಮತ್ತು ಓಎಫ್‌ಸಿ ಕೇಬಲ್‌ಗಳನ್ನು ತೆರವುಗೊಳಿಸಲು ಪ್ರತಿವಾರ ಡ್ರೈವ್‌ನ್ನು ಹಮ್ಮಿಕೊಳ್ಳಲು ವಾರ್ಡ್ ಅಭಿಯಂತರರಿಗೆ ತಿಳಿಸಿದರು.

8) ಅಧ್ಯಕ್ಷರು ಸಭೆಗೆ ಹಾಜರಿದ್ದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ರವರೊಂದಿಗೆ ಮಾತನಾಡಿ ವಾರ್ಡ್ ವ್ಯಾಪ್ತಿಯ ಬೀದಿ ದೀಪಗಳು ದುರಸ್ಥಿಯಾಗಿರುವುದು ಕಂಡುಬಂದರೆ ಕೂಡಲೇ ಗುರುತಿಸಿ ವಾರ್ಡ್ ಅಭಿಯಂತರರಿಗೆ ತಿಳಿಸುತ್ತಾ, ಇದರಿಂದ ಕ್ರೈಂಗಳಾಗುವುದು ಕಡಿಮೆಯಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

9) ಭುವನಪ್ಪ ಬಡಾವಣೆ ಸುತ್ತಮುತ್ತಲಿನ ಸಾರ್ವಜನಿಕ ಪ್ರದೇಶದಲ್ಲಿ ಧುಮಪಾನ ಹೆಚ್ಚಾಗಿರುವುದು ಕಂಡುಬಂದಿದ್ದು, ಕೂಡಲೇ ಅವರ ಮೇಲೆ ಕಾನೂನು ಕ್ರಮಕೈಗೊಳ್ಳಲು ಹಾಜರಿದ್ದ ಪೊಲೀಸ್ ಅಧಿಕಾರಿರವರಿಗೆ ತಿಳಿಸಿದರು.

10) ಸಭೆಗೆ ಹಾಜರಿದ್ದ ಮಾರ್ಷಲ್‌ರವರಿಗೆ ಕಸ ಮತ್ತು ಡೆಬರಿಸ್ ಎಲ್ಲೆಂದರಲ್ಲೆ ಸುರಿಯುತ್ತಿರುವುವರನ್ನು ಗುರುತಿಸಿ, ದಂಡವಸೂಲಿ ಮಾಡಲು ಸೂಚಿಸಿದರು.

ಕೊನೆಯದಾಗಿ, ಅಧ್ಯಕ್ಷರು ಮಾತನಾಡಿ, ಈ ಸಭೆಗೆ ಗೈರಾದ ಅಧಿಕಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಸಲ್ಲಿಸಲು ತಿಳಿಸುತ್ತಾ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

S. Prabhakar
(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ



Scanned with CamScanner